# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1089

2) ಮಾನ್ಯ ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 12/03/2026

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳ ಸಂಖ್ಯೆ ಎಷ್ಟು; ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳ ಸಂಖ್ಯೆ ಎಷ್ಟು; | ಕರ್ನಾಟಕ ರಾಜ್ಯದಲ್ಲಿ ಒಟ್ಟು 12 ಕೆ.ಎಸ್.ಆರ್.ಪಿ. ಪಡೆಗಳು ಮತ್ತು 04 ಐ.ಆರ್.ಬಿ. ಪಡೆಗಳು ಕಾರ್ಯನಿರ್ವಹಿಸುತ್ತಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆ.ಎಸ್.ಆರ್.ಪಿ-6ನೇ ಪಡೆ, ಕಲಬುರಗಿ ಮತ್ತು 01-ಐ.ಆರ್.ಬಿ, ಮುನಿರಾಬಾದ್ ಪಡೆಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಾನೂನು ಸುವ್ಯವಸ್ಥೆಗಳನ್ನು ಕಾಪಾಡುವ ಸಮಯದಲ್ಲಿ ಕೆ.ಎಸ್.ಆರ್.ಪಿ. ತುಕಡಿಗಳನ್ನು ನೆರೆಯ ಜಿಲ್ಲೆಯ ಕಲಬುರಗಿ ಘಟಕದಿಂದ ನಿಯೋಜಿಸಲಾಗುತ್ತಿದ್ದು, ಸದರಿ ಸ್ಥಳದಿಂದ ಜಿಲ್ಲೆಯನ್ನು ತಲುಪಲು ತುಂಬಾ ಸಮಯ ತಗುಲಲಿದ್ದು, ಇದರಿಂದ ತುರ್ತು ಸೇವೆ ಒದಗಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಬಂದಿದ್ದಲ್ಲಿ, ರಾಯಚೂರು ಜಿಲ್ಲೆಯಲ್ಲಿ 13ನೇ ಕೆ.ಎಸ್.ಆರ್.ಪಿ. ತುಕಡಿಯನ್ನು ಸ್ಥಾಪಿಸುವ ಕುರಿತು ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ರಾಯಚೂರು ಜಿಲ್ಲೆಯಲ್ಲಿ ಹೊಸ ಕೆ.ಎಸ್.ಆರ್.ಪಿ. ಪಡೆಯನ್ನು ಸ್ಥಾಪಿಸಲಾಗುವುದು? | ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ಕೆ.ಎಸ್.ಆರ್.ಪಿ. ಪಡೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಹೆಚ್‌ಡಿ 38 ಪಿಓಪಿ 2026**

**(ಡಾ|| ಜಿ.ಪರಮೇಶ್ವರ)**
ಗೃಹ ಸಚಿವರು.